ಮಹಿಳೆಯರಿಗಾಗಿಯೇ ಪ್ರತ್ಯೇಕವಾಗಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ತೆರೆಯಲು ಪ್ರಸ್ತಾವನೆ

337 - ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ) : ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೆ?

ಅ) ಮಹಿಳೆಯರಿಗಾಗಿಯೇ ಪ್ರತ್ಯೇಕವಾಗಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ತೆರೆಯುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೆ?

ಆ) ಇದ್ದಲ್ಲಿ, ಬೆಂಗಳೂರಿನಲ್ಲಿ ಮಹಿಳೆಯರಿಗೆ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಸ್ಥಾಪಿಸಲಾಗುವುದೆ?

ಇ) ಬೆಂಗಳೂರಿನ ಮಹಿಳಾ ಕೈಗಾರಿಕಾ ತರಬೇತಿ ಸಂಸ್ಥೆಗೆ ಪ್ರವೇಶ ಮಾಡಿಕೊಳ್ಳುವ ಸಂಖ್ಯೆ?

ಈ) 1991-92ನೇ ಸಾಲಿನಲ್ಲಿ ಮಹಿಳಾ ಕೈಗಾರಿಕಾ, ತರಬೇತಿ ಸಂಸ್ಥೆ ಸ್ಥಾಪಿಸಲಾಗುವುದೆ?

ಶ್ರೀ ಸಿ. ಎಸ್. ನಾಡಗೌಡ (ಕಾರ್ಮಿಕ ರಾಜ್ಯ ಸಚಿವರು):

ಅ) ಹೌದು.

ಆ) ಹೌದು.

ಇ) 52.

ಈ) ಇಲ್ಲ. 1992-93ನೇ ಸಾಲಿನಿಂದ ಪ್ರಾರಂಭಿಸಲಾಗುವುದು.

ಬೆಂಗಳೂರು ಮಹಾನಗರ ಪಾಲಿಕೆಯ ಪೌರಕಾರ್ಮಿಕರ ನೇಮಕಾತಿ

339 - ಶ್ರೀ ಪೆರಿಕಾಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಪೌರಕಾರ್ಮಿಕರ ನೇಮಕಾತಿಗಾಗಿ ಅರ್ಜಿಗಳನ್ನು ಕರೆಯಲಾಗಿದೆಯೇ?

ಆ) ಹಾಗಿದ್ದಲ್ಲಿ, ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು?

ಇ) ಎಷ್ಟು ಹುದ್ದೆಗಳನ್ನು ತುಂಬಲು ಉದ್ದೇಶಿಸಲಾಗಿದೆ?

ಈ) ಪೌರಕಾರ್ಮಿಕರ ನೇಮಕಾತಿಗಾಗಿ ಯಾವುದಾದರು ಸಮಿತಿಯನ್ನು ರಚಿಸಲಾಗಿದೆಯೇ?

ಉ) ಹಾಗಿದ್ದಲ್ಲಿ, ಸಮಿತಿಯ ಸದಸ್ಯರುಗಳ ಹೆಸರುಗಳೇನು?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):

ಅ) ಹೌದು.

ಆ) 49,946.

(ಇ) 1,200

ಈ) ನೇಮಕಾತಿ ಸಮಿತಿಯನ್ನು ರಚಿಸಲು ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಉ) ಉದ್ಭವಿಸುವುದಿಲ್ಲ.

ಬೆಳಗಾವಿ ನಗರ ಪಾಲಿಕೆಯ ಕಟ್ಟಡದ ಮೇಲೆ ಭಗವಾ ಝಂಡಾ

1259 - ಶ್ರೀ ಶಿರಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ನಗರಪಾಲಿಕೆಯ ಕಟ್ಟಡದ ಮೇಲೆ ಭಗವಾ ಝಂಡಾ ಹಾರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಅ) ಹಾಗಿದ್ದರೆ ಬೆಳಗಾವಿ ನಗರಪಾಲಿಕೆಯ ಕಟ್ಟಡದ ಮೇಲಿರುವ ಭಗವಾ ಝಂಡಾ ತೆಗೆಸುವುದರ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಇ) ಸರ್ಕಾರವು ಬೆಳಗಾವಿ ನಗರಪಾಲಿಕೆಯ ಕಟ್ಟಡದ ಮೇಲೆ ರಾಷ್ಟ್ರಧ್ವಜ ಹಾರಿಸುವಂತೆ ನಿರ್ದೇಶನ ನೀಡುವುದೇ?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):

ಅ) ಹೌದು.

ಆ) ರಾಜ್ಯದ ಎಲ್ಲಾ ನಗರಪಾಲಿಕೆಗಳ ಕಟ್ಟಡಗಳ ಮೇಲೆ ರಾಷ್ಟ್ರಧ್ವಜ ಹಾಗೂ ಸರಕಾರದಿಂದ ಅಂಗೀಕೃತವಾದ ಧ್ವಜವನ್ನು ಹೊರತುಪಡಿಸಿ, ಉಳಿದ ಯಾವುದೇ ಧ್ವಜವನ್ನು ಹಾರಿಸುವದನ್ನು ನಿಷೇಧಿಸುವ ಕಲಂಗಳನ್ನು 1976ರ ಕರ್ನಾಟಕ ಮಹಾನಗರಪಾಲಿಕೆಗಳ ಕಾಯಿದೆ ಹಾಗೂ 1964ರ ಕರ್ನಾಟಕ ಮುನಿಸಿಪಾಲಿಟಿಗಳ ಕಾಯಿದೆಗೆ ಸೇರಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಇ) ಕ್ರಮ ಸಂಖ್ಯೆ 2 ಕ್ಕೆ ನೀಡಿರುವ ಉತ್ತರದಿಂದ ಇದು ಉದ್ಭವಿಸುವುದಿಲ್ಲ.

ನಿಪ್ಪಾಣಿ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ

1272 - ಶ್ರೀ ಸುಭಾಷ್ ಜೋಷಿ (ನಿಪ್ಪಾಣಿ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಿಪ್ಪಾಣಿ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಾದರೆ, ಈ ಸಮಸ್ಯೆಯನ್ನು ನೀಗಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):

ಅ) ಹೌದು.

ಆ) ಸರ್ಕಾರವು ರೂ. 110.00 ಲಕ್ಷಗಳ ಅಂದಾಜು ವೆಚ್ಚದ ನಿಪ್ಪಾಣಿ ಪಟ್ಟಣದ ಹೆಚ್ಚುವರಿ ನೀರು ಸರಬರಾಜು ಯೋಜನೆಗೆ 30-3-1990 ರಲ್ಲಿ ಮಂಜೂರಾತಿ ನೀಡಿದೆ. ಈ ಯೋಜನೆಯನ್ನು ಕಾರ್ಯಗತಗೊಳಿಸಲು ಕೈಗೆತ್ತಿಕೊಳ್ಳಲಾಗಿದೆ. ಈ ಯೋಜನೆಯು ಪೂರ್ತಿಗೊಂಡ ಮೇಲೆ ನಿಪ್ಪಾಣಿ ನಗರದ ಕುಡಿಯುವ ನೀರಿನ ಸಮಸ್ಯೆಯನ್ನು ನೀಗಿಸಬಹುದಾಗಿದೆ.

ರಾಜ್ಯದಲ್ಲಿ ಜಿಲ್ಲಾ ಕಾರ್ಮಿಕ ನ್ಯಾಯಾಲಯಗಳ ಪ್ರಾರಂಭ

1273 - ಶ್ರೀ ಸುಭಾಷ್ ಜೋಷಿ (ನಿಪ್ಪಾಣಿ) : ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಇಡೀ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಮಿಕ ನ್ಯಾಯಾಲಯಗಳನ್ನು ಸ್ಥಾಪನೆ ಮಾಡುವ ಯೋಜನೆ ಇದೆಯೇ?

ಆ) ಹಾಗಿದ್ದಲ್ಲಿ, ಬೆಳಗಾಂ ಜಿಲ್ಲೆಯಲ್ಲಿ ಯಾವಾಗ ಕಾರ್ಮಿಕ ನ್ಯಾಯಾಲಯ ಸ್ಥಾಪನೆ ಆಗುವುದು?

ಶ್ರೀ ಸಿ. ಎಸ್. ನಾಡಗೌಡ (ಅಪ್ಪಾಜಿ) (ಕಾರ್ಮಿಕ ಸಚಿವರು) :

ಅ) ಪ್ರತಿ ಜಿಲ್ಲೆಯಲ್ಲಾ ಕಾರ್ಮಿಕ ನ್ಯಾಯಾಲಯವನ್ನು ಸ್ಥಾಪಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಆ) ಬೆಳಗಾಂನಲ್ಲಿ ಕಾರ್ಮಿಕ ನ್ಯಾಯಾಲಯವನ್ನು ಕೆಲಸದ ಒತ್ತಡ ಹಾಗೂ ಹಣದ ಲಭ್ಯತೆಯ ಮೇಲೆ ನಿರ್ಧರಿಸಲಾಗುವುದು.